# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 958 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 27-12-2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (NEP) ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ: | ಹೌದು, ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿ (NEP) ಜಾರಿಗೊಳಿಸಲು ಸರ್ಕಾರವು ಉದ್ದೇಶಿಸಿದೆ. |
| ಆ. | ಹಾಗಿದ್ದಲ್ಲಿ, ಈ ಕುರಿತಂತೆ ಮುಕ್ತ ಚರ್ಚೆಗೆ ಅವಕಾಶ ಕಲ್ಪಿಸಿಕೊಡುವ ಉದ್ದೇಶವಿದೆಯೇ: | ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯನ್ವಯ, ಶಾಲಾ ಪೂರ್ವ ಶಿಕ್ಷಣಕ್ಕಾಗಿ 6 ಉಪ ಸಮಿತಿಗಳನ್ನೊಳಗೊಂಡ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಗಳು ಅಂತಿಮವಾಗಿ ವರದಿ ಸಲ್ಲಿಸಿದ ನಂತರ ವರದಿಯ ಅನುಷ್ಠಾನದ ಬಗ್ಗೆ ಮುಕ್ತ ಚರ್ಚೆಗೆ ಅವಕಾಶ ಕಲ್ಪಿಸುವ ಬಗ್ಗೆ ಪರಿಶೀಲಿಸಲಾಗುವುದು. |
| (ಇ) | ಅಂಗನವಾಡಿ ಕಾರ್ಯಕರ್ತೆಯರನ್ನು ಶಾಲಾ ವಠಾರಕ್ಕೆ ಸೇರಿಸಿದ ಕುರಿತಾಗಿ ಇರುವ ಗೊಂದಲ ಮತ್ತು ಅಪಾಯದ ಕುರಿತು ಸರ್ಕಾರ ಗಮನ ಹರಿಸಿದೆಯೇ: | ಕೆಲವು ಅಂಗನವಾಡಿ ಕೇಂದ್ರಗಳು ಶಾಲಾ ಆವರಣದಲ್ಲಿ ನಡೆಯುತ್ತಿದ್ದು, ಈ ಕೇಂದ್ರಗಳಲ್ಲಿಯೂ ಸಹ ಅಂಗನವಾಡಿ ಕಾರ್ಯಕರ್ತೆಯರು ಇತರೆ ಅಂಗನವಾಡಿ ಕೇಂದ್ರಗಳಂತೆ ಸೇವೆಯನ್ನು ಒದಗಿಸುತ್ತಿದ್ದಾರೆ. ಈ ಕೇಂದ್ರಗಳಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಗೊಂದಲವಿರುವ ಕುರಿತು ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ. |
| (ಈ) | ರಾಜ್ಯ ಸರ್ಕಾರವು ರಾಷ್ಟ್ರೀಯ ಶಿಕ್ಷಣ ನೀತಿಯನ್ನು (NEP) ಏಕ ಪಕ್ಷೀಯವಾಗಿ ಆತುರದ ಕ್ರಮಕ್ಕೆ ಮುಂದಿದೆಯೇ: ಚರ್ಚೆಗೆ ಒಳಪಡಿಸಿ ಜಾರಿಗೊಳಿಸುವ ಸರ್ಕಾರ ಯೋಜಿಸಿದೆಯೇ? | ರಾಷ್ಟ್ರೀಯ ಶಿಕ್ಷಣ ನೀತಿ ಮಾರ್ಗಸೂಚಿಯನ್ವಯ, ಶಾಲಾ ಪೂರ್ವ ಶಿಕ್ಷಣಕ್ಕಾಗಿ ಶಿಕ್ಷಣ ಇಲಾಖೆಯ ಅಧಿಕಾರಿ, ತಜ್ಞರನ್ನೊಳಗೊಂಡ ಸಮಿತಿಗಳನ್ನು ರಚಿಸಲಾಗಿರುತ್ತದೆ.<br>ಈ ಸಮಿತಿಗಳು ನೀಡುವ ವರದಿಯನ್ನು ಪರಿಶೀಲಿಸಿ ಪಠ್ಯಕ್ರಮವನ್ನು ರಚಿಸಿ ಅಂಗನವಾಡಿ ಕಾರ್ಯಕರ್ತೆಯರಿಗೆ ಹಂತ ಹಂತವಾಗಿ ತರಬೇತಿ ನೀಡಲಾಗುವುದು. ಹೀಗಾಗಿ ಏಕಪಕ್ಷೀಯವಾಗಿ ಜಾರಿಗೊಳಿಸುವ ಆತುರದ ಕ್ರಮ ಕೈಗೊಂಡಿರುವುದಿಲ್ಲ. |

**ಸಂಖ್ಯೆ:ಮಮಇ 373 ಐಸಿಡಿ 2022**

Halappa SA

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು